**ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಯಾದಗಿರಿ**

**ಸಿ.ಸಿ.ನಂ.1155/2024**

ಫಿರ್ಯಾದುದಾರರು : ಶ್ರೀ ದಿನೇಶ ಶರ್ಮಾ ತಂದೆ ಸೂರ್ಯಪ್ರಕಾಶ ಶರ್ಮಾ,

**ವಿರುದ್ಧ**

ಆಪಾದಿತ : ಶ್ರೀ ರಾಜ್ ಕುಮಾರ ಖಂಡೆಲವಾಲ್ ತಂದೆ ಮೋಹನಲಾಲ್ ಖಂಡೆಲವಾಲ್,

**ಆಪಾದನೆ**

**ಶ್ರೀ ಅರುಣ ಚೌಗುಲೆ ಬಿ.ಎ.,ಎಲ್ಎಲ್.ಬಿ.,(Honors) ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಯಾದಗಿರಿ ಆದ ನಾನು ಮೇಲ್ಕಂಡ ಆರೋಪಿತರಾದ ನಿಮ್ಮ ಮೇಲೆ ಕೆಳಕಂಡಂತೆ ಆಪಾದನೆಯನ್ನು ಹೊರಿಸುತ್ತಿದ್ದೇನೆ.**

ಪಿರ್ಯಾದಿದಾರರು ಮತ್ತು ಆಪಾದಿತನಾದ ನೀವು ಪರಿಚಯಸ್ಥರಾಗಿರುತ್ತೀರಿ ಹಾಗೂ ಸದರಿ ಪರಿಚಯದ ಆಧಾರದ ಮೇಲೆ ನೀವು ದೂರುದಾರರಿಂದ **29.10.2021** ರಂದು ರೂ.**8,46,000/-** ಗಳನ್ನು ಸಾಲಪಡೆದಿದ್ದು, ಸದರಿ ಹಣವನ್ನು ಮರುಪಾವತಿ ಮಾಡುವಂತೆ ಒತ್ತಾಯಿಸಿದಾಗ ಆಪಾದಿತನಾದ ನೀವು ಖಾತೆ ಹೊಂದಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಯಾದಗಿರಿ ಶಾಖೆಗೆ ಸೇರಿದ **017740** ಸಂಖ್ಯೆಯ ಚೆಕ್ ನಲ್ಲಿ ರೂ. **8,46,500/-** ಹಾಗೂ ದಿನಾಂಕ **30.01.2024** ಎಂದು ನಮೂದು ಮಾಡಿ ಬ್ಯಾಂಕಿಗೆ ಹಾಜರುಪಡಿಸಿ ನಗದೀಕರಿಸಿಕೊಳ್ಳುವಂತೆ ನೀಡಿದ್ದಿರಿ. ಸದರಿ ಚೆಕ್ನ್ನು ಪಿರ್ಯಾದುದಾರರು ನಗದೀರಣಕ್ಕಾಗಿ ತಾವು ಖಾತೆ ಹೊಂದಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಯಾದಗಿರಿ ಶಾಖೆಯ ಮೂಲಕ ಹಾಜರು ಪಡಿಸಿದಾಗ**,** "Account closed" ಎಂಬ ಹಿಂಬರಹದೊಂದಿಗೆ ಅಮಾನ್ಯಗೊಂಡು ಚೆಕ್ಕನ್ನು ದಿನಾಂಕ **31.01.2024** ರಂದು ವಾಪಸ್ಸು ನೀಡಿರುತ್ತಾರೆ. ನಂತರ ಪಿರ್ಯಾದುದಾರರು ತಮ್ಮ ವಕೀಲರ ಮೂಲಕ ದಿನಾಂಕ **27.02.2024** ರಂದು ಅಪಾದಿತನಾದ ನಿಮ್ಮ ವಿಳಾಸಕ್ಕೆ ನೊಂದಾಯಿತ ಅಂಚೆಯ ಮೂಲಕ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದು, ದಿನಾಂಕ **29.02.2024** ರಂದು ಸದರಿ ನೋಟಿಸ್ ಜಾರಿಯಾಗದೆ ಮರಳಿ ಬಂದಿರುತ್ತದೆ**.** **ಆಪಾದಿತನಾದ** ನೀವು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದಿದ್ದರು ದೂರುದಾರರಿಗೆ ಚೆಕ್ನ್ನು ನೀಡಿ ನಂತರ ಚೆಕ್ ಮೊತ್ತವನ್ನು ಪಾವತಿ ಮಾಡದೆ **ಇರುವುದರ ಮೂಲಕ ವರ್ಗಾವಣೀಯ ಲಿಖಿತ ಕಾಯ್ದೆ ಕಲಂ 138ರ ರೀತ್ಯಾ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಾ ಎಂದು ಆಪಾದಿಸಲಾಗಿದೆ.**

ಪ್ರಶ್ನೆ-೧ : ನಿಮ್ಮ ಮೇಲೆ ಹೊರಿಸಲಾಗಿರುವ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರ :

ಪ್ರಶ್ನೆ-೨ : ನೀವು ಸದರೀ ಆಪಾದನೆಯನ್ನು ಒಪ್ಪಿಕೊಳ್ಳುವಿರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೆ ?

ಉತ್ತರ :

ಮೇಲ್ಕಂಡಂತೆ ಆಪಾದನೆಯನ್ನು ಆಪಾದಿತನಿಗೆ ತಿಳಿದ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರಗಳನ್ನು ಬರೆದುಕೊಂಡಿರುವುದಾಗಿ ದೃಢೀಕರಿಸಲಾಗಿದೆ.

ದಿನಾಂಕಃ 19.09.2024.
ಸ್ಥಳಃ ಯಾದಗಿರಿ

ದಿವಾಣಿ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ,
ಯಾದಗಿರಿ